ಕರ್ನಾಟಕ ಸರ್ಕಾರ
Government of Karnataka

ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
DEPARTMENT OF STATE EDUCATIONAL RESEARCH AND TRAINING
No 4, 100 FT RING ROAD, BANASHANKARI 3 RD STAGE BENGALURU - 560 085
Email: dpi.dsert-ka@nic.in Website: http://dsert.kar.nic.in

Phone - 080 26980100
Fax - 080 26422377

ಡಿಎಸ್ಇಆರ್‌ಟಿ DSERT

ಸಂಖ್ಯೆ:DSERT/NTSE/Others/2023-24 ದಿನಾಂಕ : 9/11/2023

# ಸುತ್ತೋಲೆ

ವಿಷಯ : ರಾಜ್ಯದ ಶಾಲೆಗಳಲ್ಲಿ ಮಕ್ಕಳ ದಿನಾಚರಣೆಯನ್ನು ಆಚರಿಸುವ ಬಗ್ಗೆ.

ಉಲ್ಲೇಖ : ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಬೆಂಗಳೂರುರವರ ಕಛೇರಿಯ ಟಿಪ್ಪಣಿ ದಿನಾಂಕ 8-11-2023.

************

ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಶಾಲೆಗಳಲ್ಲಿ ರಾಷ್ಟ್ರೀಯ ಹಬ್ಬಗಳನ್ನು ಹಾಗೂ ಇನ್ನಿತರ ಪ್ರಮುಖ ಜಯಂತಿಗಳನ್ನು ಕಡ್ಡಾಯವಾಗಿ ಆಯಾ ದಿನಗಳಂದು ಗೌರವ ಪೂರ್ವಕವಾಗಿ ಆಚರಿಸತಕ್ಕದ್ದೆಂದು, ಮಾನ್ಯ ಆಯಕ್ತರ ಕಛೇರಿಯ ದಿನಾಂಕ 30-03-2023 ರ ಸುತ್ತೋಲೆಯಲ್ಲಿ ತಿಳಿಸಲಾಗಿದೆ. ಮುಂದುವರೆದು ಪ್ರತಿ ವರ್ಷ ನವೆಂಬರ್ 14 ರಂದು, ಭಾರತದ ಪ್ರಥಮ ಪ್ರಧಾನ ಮಂತ್ರಿಗಳಾದ ಪಂಡಿತ ಜವಾಹರ್ ಲಾಲ್ ನೆಹರುರವರ ಜಯಂತಿಯ ನಿಮಿತ್ತ ಮಕ್ಕಳ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.

ಈ ಬಾರಿ ನವಂಬರ್ 14, ಮಂಗಳವಾರ ಆಚರಿಸಬೇಕಾದ ಮಕ್ಕಳ ದಿನಾಚರಣೆಯ ದಿನದಂದು ಬಲಿಪಾಡ್ಯಮಿ – ದೀಪಾವಳಿಯ ಪ್ರಯುಕ್ತ ಸಾರ್ವತ್ರಿಕ ರಜೆ ಇರುತ್ತದೆ. ಈ ಹಿನ್ನೆಲೆಯಲ್ಲಿ ಈ ಸಾಲಿನ ಮಕ್ಕಳ ದಿನಾಚರಣೆಯನ್ನು ನಂತರದ ಶಾಲಾ ದಿನದಂದು ರಾಜ್ಯದ ಎಲ್ಲಾ ಶಾಲೆಗಳಲ್ಲಿ ಸರಳವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸುವುದು ಅತ್ಯಗತ್ಯವಾಗಿರುತ್ತದೆ.

ಮಕ್ಕಳ ದಿನಾಚರಣೆಯು ಕೇವಲ ಸಾಂಕೇತಿಕ ಆಚರಣೆಯಲ್ಲ, ಇದು ದೇಶದ ಭವಿಷ್ಯತ್ತನ್ನು ರೂಪಿಸುವಲ್ಲಿ ಅತ್ಯಂತ ಮಹತ್ತರವಾದ ಆಚರಣೆಯಾಗಿದೆ. ಹಾಗಾಗಿ ನವೆಂಬರ್ 14 ರ ನಂತರದ ಶಾಲಾ ಕರ್ತವ್ಯದ ದಿನದಂದು, ಶಾಲಾ ಪ್ರಾರ್ಥನಾ ವೇಳೆಯಲ್ಲಿ ವಿದ್ಯಾರ್ಥಿಗಳಿಗೆ ಮಕ್ಕಳ ದಿನಾಚರಣೆಯ ಮಹತ್ವದ ಬಗ್ಗೆ ಅರಿವು ಮೂಡಿಸಲು ರಾಜ್ಯದ ಎಲ್ಲಾ ಶಾಲಾ ಮುಖ್ಯ ಶಿಕ್ಷಕರು ಕ್ರಮವಹಿಸತಕ್ಕದ್ದು.

ಮುಂದುವರೆದು, ಶಾಲೆಗಳಲ್ಲಿ, ಮಕ್ಕಳ ದಿನಾಚರಣೆಯ ಪ್ರಯುಕ್ತ, ವಿದ್ಯಾರ್ಥಿಗಳಿಗೆ ಆಟೋಟಗಳು, ಪ್ರಬಂಧ ಬರವಣಿಗೆ, ಭಾಷಣ, ಚಿತ್ರಕಲೆ, ಕೋಲ್ಯಾಜ್ ಮೇಕಿಂಗ್, ಪಾತ್ರಾಭಿನಯ, ಸ್ವರಚಿತ ಕವನ, ಪತ್ರ ಲೇಖನ, ಛದ್ಮ ವೇಷ, ಆಶು ಭಾಷಣ, ಸಮೂಹ ಗಾಯನ, ಚರ್ಚಾ ಸ್ಪರ್ಧೆ, ಘೋಷಣಾ ವಾಕ್ಯ ಬರೆಯುವುದು, ಮುಂತಾದ ಚಟುವಟಿಕೆಗಳನ್ನು, ಶಾಲಾ ಪಾಠ ಪ್ರವಚನಗಳಿಗೆ ತೊಂದರೆ ಉಂಟಾಗದಂತೆ ನಿರ್ವಹಿಸುವುದು.

ಮೇಲೆ ತಿಳಿಸಲಾದ ಚಟುವಟಿಕೆಗಳು ಶಾಲೆಗಳಲ್ಲಿ ನಿರ್ವಹಿಸಬಹುದಾದ ಸಲಹಾತ್ಮಕ ಚಟುವಟಿಕೆಗಳಾಗಿರುತ್ತವೆ. ಶಾಲೆಯ ಸ್ಥಳೀಯ ಪರಿಸರ ಹಾಗೂ ಅಗತ್ಯಗಳಿಗನುಗುಣವಾಗಿ, ಶಾಲಾ ವೇಳಾಪಟ್ಟಿಯಲ್ಲಿ ಸಮಯ ಹೊಂದಾಣಿಕೆ ಮಾಡಿಕೊಂಡು, ಚಟುವಟಿಕೆಗಳನ್ನು

ಆಯೋಜಿಸುವುದು. ವಿದ್ಯಾರ್ಥಿಗಳ ವಯಸ್ಸಿಗನುಗುಣವಾಗಿ, ಇನ್ನಿತರ ಕ್ರಿಯಾತ್ಮಕ ಮತ್ತು ಕಲಿಕಾ ಪೂರಕ ಸಹಪಠ್ಯ ಚಟುವಟಿಕೆಗಳನ್ನು ರೂಪಿಸಲು ಶಾಲೆಗಳಿಗೆ ಅವಕಾಶವಿರುತ್ತದೆ.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಶಾಲಾ ಮುಖ್ಯ ಶಿಕ್ಷಕರು ಶಾಲಾ ಎಸ್.ಡಿ.ಎಂ.ಸಿ, ಸ್ಥಳೀಯ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ, ಮಕ್ಕಳ ದಿನಾಚರಣೆಯನ್ನು ಅರ್ಥಪೂರ್ಣವಾಗಿ, ಹಬ್ಬದ ರೀತಿಯಲ್ಲಿ ಆಚರಣೆ ಮಾಡುವುದು.

ಈ ಬಗ್ಗೆ ರಾಜ್ಯದ ಎಲ್ಲಾ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಡಯಟ್ ಪ್ರಾಂಶುಪಾಲರು ತಮ್ಮ ವ್ಯಾಪ್ತಿಯ ಎಲ್ಲಾ ಪ್ರಾಥಮಿಕ/ಪ್ರೌಢಶಾಲೆಗಳಲ್ಲಿ ಕಡ್ಡಾಯವಾಗಿ ಮಕ್ಕಳ ದಿನಾಚರಣೆಯನ್ನು ಆಚರಿಸುವಂತೆ ಕ್ರಮವಹಿಸಲು ತಿಳಿಸಿದೆ.

ನಿರ್ದೇಶಕರ ಪರವಾಗಿ
ಡಿ.ಎಸ್.ಇ.ಆರ್.ಟಿ.
ಬೆಂಗಳೂರು -85

ಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ ) ಇವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಡಯಟ್ ಪ್ರಾಂಶುಪಾಲರಿಗೆ ಅಗತ್ಯ ಕ್ರಮಕ್ಕಾಗಿ.
3. ಎಲ್ಲಾ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಉಪನಿರ್ದೇಶಕರು (ಆಡಳಿತ) ಇವರ ಮೂಲಕ ಅಗತ್ಯ ಕ್ರಮಕ್ಕಾಗಿ.
4. ಎಲ್ಲಾ ಶಾಲಾ ಮುಖ್ಯ ಶಿಕ್ಷಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು ಗೌರವ ಪೂರ್ವಕವಾಗಿ ಸಲ್ಲಿಸಿದೆ.

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ , ಕರ್ನಾಟಕ ಸರ್ಕಾರ.
2. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ. ಬೆಂಗಳೂರು.
3. ಮಾನ್ಯ ಅಪರ ಆಯುಕ್ತರು, ಧಾರವಾಡ ಮತ್ತು ಕಲ್ಬುರ್ಗಿ ವಿಭಾಗ ಶಾಲಾ ಶಿಕ್ಷಣ ಇಲಾಖೆ.
4. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು.
5. ಕಛೇರಿ ಪ್ರತಿ.